# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.21/ಪಿಆರ್: 35 :2022-23 ದಿನಾಂಕ: 05.11.2022

## ದಾಸರಹಳ್ಳಿ ವಾರ್ಡ್-21ರ ವಾರ್ಡ್ ಸಭೆಯ ನಡವಳಿ

ದಿ.05.11.2022 ರಂದು ಮದ್ಯಾಹ್ನ 12.30 ಗಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಶ್ರೀ.ಎನ್.ಡಿ.ವೆಂಕಟೇಶ್, ವಾರ್ಡ್ ಕಮಿಟಿ ನೊಡೆಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು. ಇಂದಿನ ಸಭೆಯಲ್ಲಿ ನಡೆದ ವಾರ್ಡ್ ಸಮಿತಿ ನಡವಳಿಗಳು ಈ ಕೆಳಕಂಡಂತಿದೆ.

**ಹಾಜರಿದ್ದವರು:**

1. ಶ್ರೀ.ಎನ್.ಡಿ.ವೆಂಕಟೇಶ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ವಾರ್ಡ್ ಕಮಿಟಿ ನೊಡೆಲ್ ಆಫೀಸರ್, ದಾಸರಹಳ್ಳಿ ವಾರ್ಡ್ ನಂ.21
2. ಶ್ರೀ.ವೆಂಕಟೇಶಪ್ಪ, ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ದಾಸರಹಳ್ಳಿ ವಾರ್ಡ್ ನಂ.21
3. ಶ್ರೀಮತಿ.ಡಾ॥ಮಂಜುಳ, ಮೆಡಿಕಲ್ ಆಫಿಸರ್, ನೆಲಮಹೇಶ್ವರಿ ಪ್ರಾ.ಆ.ಕೇಂ
4. ಶ್ರೀಮತಿ.ಚೈತ್ರ ಎಂ, ಕಿರಿಯ ಆರೋಗ್ಯ ಪರಿವೀಕ್ಷಕರು, ದಾಸರಹಳ್ಳಿ ವಾರ್ಡ್ ನಂ.21
5. ಶ್ರೀ.ಪಾರ್ಥ ಎಸ್.ಆರ್, ಹಿರಿಯ ಆರೋಗ್ಯ ಪರಿವೀಕ್ಷಕರು, ದಾಸರಹಳ್ಳಿ ವಾರ್ಡ್ ನಂ.21
6. ಶ್ರೀ.ಶಿವರಾಜ್ ಎಂ, ಬಿಎಂಟಿಸಿ ಇಲಾಖೆ, ಮಲ್ಲಸಂದ್ರ
7. ಶ್ರೀ.ಗಣೇಶ್, ಬೀದಿ ದೀಪಗಳ ನಿರ್ವಹಣೆ, ಬಿಬಿಎಂಪಿ
8. ಶ್ರೀ.ಶಾಂತಕುಮಾರ್, ಎಸ್.ಡಬ್ಲ್ಯೂ.ಎಂ ಮೇಲ್ವಿಚಾರಕರು
9. ಶ್ರೀ.ತಮ್ಮಣ್ಣ, ಅಧ್ಯಕ್ಷರು, ವಿನಾಯಕ ಕನ್ನಡ ಸಂಘ, ದಾಸರಹಳ್ಳಿ ವಾರ್ಡ್ ನಂ.21
10. ಶ್ರೀ.ಎಂ.ಮಹೇಶ, ನೀರು ಸರಬರಾಜು ಸಹಾಯಕ, ದಾಸರಹಳ್ಳಿ
11. ಶ್ರೀಮತಿ.ಶ್ಯಾಮಲಾ ಆರ್, ಲಿಂಕ್ ವರ್ಕರ್, ದಾಸರಹಳ್ಳಿ

ನೋಡೆಲ್ ಅಧಿಕಾರಿಗಳು ವಾರ್ಡ್ ನಂ.21, ದಾಸರಹಳ್ಳಿ ರವರು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಗೂ ಹಾಜರಿದ್ದ ಅಧಿಕಾರಿಗಳನ್ನು ಸ್ವಾಗತಿಸಿ ಮಾತನಾಡುತ್ತಾ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಸಾರ್ವಜನಿಕರ ನಡುವೆ ಸಮನ್ವಯ ಸಾಧಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪ್ರತೀ ವಾರ್ಡ್‌ಗೆ ನೋಡೆಲ್ ಅಧಿಕಾರಿಗಳನ್ನು ನೇಮಿಸಿ, ಸಾರ್ವಜನಿಕ ಕುಂದುಕೊರತೆ ನಿವಾರಣಾ ಸಂಬಂಧ ಪ್ರತೀ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಸಭೆ ಸೇರಿ ವಾರ್ಡ್‌ನ ಕುಂದುಕೊರತೆಗಳ ಬಗ್ಗೆ ಚರ್ಚಿಸಿ, ಅಗತ್ಯ ಕ್ರಮವಹಿಸಲು ಸೂಚಿಸಿರುವುದಾಗಿ ತಿಳಿಸಿದರು.

### 1. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.

- ಘನತ್ಯಾಜ್ಯ ನಿರ್ವಹಣೆಯ ಸಂಬಂಧ ವಾರ್ಡ್‌ನಲ್ಲಿ 19 ಆಟೋಗಳು, ಒಣ ಕಸ ಸಂಗ್ರಹಣಾ ಆಟೋ-03, ಹಾಗೂ 02 ಕಾಂಪ್ಯಾಕ್ಟರ್ ವಾಹನಗಳು ಘನತ್ಯಾಜ್ಯ ವಿಲೇವಾರಿಗಾಗಿ ನಿಯೋಜಿಸಲಾಗಿರುತ್ತದೆಂದು ವಾರ್ಡ್ ಸಮಿತಿ ಸಭೆಯಲ್ಲಿ ಕಿರಿಯ ಆರೋಗ್ಯ ಪರಿವೀಕ್ಷಕರು ರವರು ತಿಳಿಸಿದರು.

Scanned with CamScanner

- ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿ ನಿತ್ಯ ಮನೆ ಮನೆಗಳಿಂದ ಕಸ ಸಂಗ್ರಹಿಸುವ ಆಟೋಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿರುವುದಾಗಿ, ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ತಿಳಿಸಿದರು.

**2.ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.**

- ದಾಸರಹಳ್ಳಿ ವಾರ್ಡ್ ನಂ.21ರ ಮೆಟ್ರೋ ಸ್ಟೇಷನ್ ಹಿಂಬಾಗ ಡಾಂಬರೀಕರಣ ಕಾಮಗಾರಿ ಕೆಲಸವು ಪ್ರಾರಂಭಗೊಂಡಿರುವುದಾಗಿ ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ಉಂಟಾಗಿರುವ ರಸ್ತೆ ಗುಂಡಿಗಳನ್ನು ಮುಚ್ಚುವ ಕಾಮಗಾರಿಯು ಭಾಗಶಃ 99% ಪೂರ್ಣಗೊಂಡಿರುವುದಾಗಿ ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯ ಬಡಾವಣೆಗಳಲ್ಲಿನ ರಸ್ತೆ ಹಾಗೂ ಚರಂಡಿ ಕಾಮಗಾರಿಗಳು ಬಹುತೇಕ ಪೂರ್ಣಗೊಂಡಿರುವುದಾಗಿ ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿದರು.

**3. ಬೆಸ್ಕಾಂಗೆ ಸಂಬಂಧಿಸಿದ ಬಗ್ಗೆ.**

- ದಾಸರಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖೆಯವರು ರಸ್ತೆಗಳನ್ನು ಅಗೆದು ಕೇಬಲ್‌ಗಳನ್ನು ಅಳವಡಿಸುವ ಕಾಮಗಾರಿಯನ್ನು ನಿರ್ವಹಿಸಲು ಸಾರ್ವಜನಿಕ ರಸ್ತೆಗಳನ್ನು ಅಗೆದು ಹಾಳುಮಾಡುತ್ತಿರುವುದರಿಂದ ವಾಹನ ಸಂಚಾರಕ್ಕೆ ಹಾಗೂ ಸಾರ್ವಜನಿಕ ಓಡಾಟಕ್ಕೆ ತೊಂದರೆ ಉಂಟಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಸದರಿ ವಿಷಯಗಳ ಬಗ್ಗೆ ತುರ್ತು ಕ್ರಮವಹಿಸಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲಾಯಿತು.

**4. ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿದ ಬಗ್ಗೆ.**

- ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ಒಳಚರಂಡಿ ಹಾಗೂ ಕುಡಿಯುವ ನೀರಿನ ಸಂಪರ್ಕಕ್ಕಾಗಿ ಕಾವೇರಿ ನೀರಿನ ಸರಬರಾಜು ವ್ಯವಸ್ಥೆಯನ್ನು ಅಳವಡಿಸಲು ರಸ್ತೆಗಳನ್ನು ಅಗೆಯುತ್ತಿರುವುದರಿಂದ ವಾಹನ ಸವಾರರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವ ಬಗ್ಗೆ ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ತಿಳಿಸಿದರು.
- ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ವಾರ್ಡ್ ವ್ಯಾಪ್ತಿಯಲ್ಲಿ ಕಾವೇರಿ ನೀರಿನ ಸರಬರಾಜು ವ್ಯವಸ್ಥೆಯನ್ನು ಸಮರ್ಪಕವಾಗಿ ನಿರ್ವಹಿಸುತ್ತಿದ್ದಾರೆಂದು ವಾರ್ಡ್ ಸದಸ್ಯರು ಸಭೆಯಲ್ಲಿ ತಿಳಿಸಿದರು.

ಸದರಿ ವಿಷಯಗಳ ಬಗ್ಗೆ ತುರ್ತು ಕ್ರಮವಹಿಸಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲಾಯಿತು.

**5. ಇತರೆ ವಿಷಯಗಳ ಬಗ್ಗೆ:**

- ಬೆಸ್ಕಾಂ ಇಲಾಖೆಯವರು ಯಾವುದೇ ಅನುಮತಿ ಪಡೆಯದೇ ಸಾರ್ವಜನಿಕ ರಸ್ತೆಯನ್ನು ಅಗೆದು ಕೇಬಲ್ ಅಳವಡಿಸುವ ಕಾರ್ಯವನ್ನು ನಡೆಸುತ್ತಿರುವುದರಿಂದ ವಾಹನ ಸವಾರರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುತ್ತದೆ. ಈ ಬಗ್ಗೆ ತುರ್ತು ಕ್ರಮವಹಿಸಿ ದುರಸ್ಥಿ ಕಾರ್ಯ ಕೈಗೊಂಡು ಪೂರ್ಣಗೊಳಿಸಲು ಸಂಬಂಧಪಟ್ಟ ಇಲಾಖೆಯವರಿಗೆ ಸೂಚಿಸಲು ವಾರ್ಡ್ ಸಮಿತಿ ಸದಸ್ಯರು ಸಭೆಯಲ್ಲಿ ಕೋರಿದರು.
- ಬಿಬಿಎಂಪಿ ಮಾರ್ಷಲ್‌ಗಳು ಕಳಪೆ ಗುಣಮಟ್ಟದ ಪ್ಲಾಸ್ಟಿಕ್ ಬಳಸುತ್ತಿರುವ ಅಂಗಡಿ ಮಾಲೀಕರುಗಳು, ಬೀದಿಬದಿ ವ್ಯಾಪಾರಿಗಳಿಗೆ ಇನ್ನಿತರೆಯವರುಗಳಿಗೆ ದಂಡ ವಿಧಿಸುತ್ತಿರುವುದಾಗಿ ಬಿಬಿಎಂಪಿ ಮಾರ್ಷಲ್‌ಗಳು ತಿಳಿಸಿದ್ದರು ಇದನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಸರ್ವಾನುಮತದಿಂದ ಸಭೆಯಲ್ಲಿ ಸೂಚಿಸಲಾಯಿತು.

Scanned with CamScanner

ಅಂತಿಮವಾಗಿ ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸ್ಪಂದಿಸಿ ಬಗೆಹರಿಸಲು, ಕ್ರಮ ತೆಗೆದುಕೊಂಡ ಬಗ್ಗೆ ಎಲ್ಲಾ ಇಲಾಖೆಗಳ ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಹಾಗೂ ಮುಂದಿನ ಸಭೆಗೆ ಎಲ್ಲಾ ಇಲಾಖೆಯಿಂದ ಅಧಿಕಾರಿಗಳು ಸಭೆಗೆ ಹಾಜರಾಗಿ ಸಾಧಿಸಬೇಕಾದ ಗುರಿ ಹಾಗೂ ಸಾಧನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ವಾರ್ಡ್ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 21, ದಾಸರಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧಿಕಾರಿಗಳ ಮಾಹಿತಿಗಾಗಿ

1) ಸನ್ಮಾನ್ಯ ಶ್ರೀ.ಆರ್.ಮಂಜುನಾಥ್ ರವರು, ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಮಾನ್ಯ ವಿಶೇಷ ಆಯುಕ್ತರು, ಬಿಬಿಎಂಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
3) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
4) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
5) ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
6) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
8) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಸಲ್ಲಿಸಿದೆ.
11) ಕಛೇರಿ ಪ್ರತಿ.

Scanned with CamScanner